**ದಿನಾಂಕಃ 11.08.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನನ್ನನ್ನು ಮಳಲಗದ್ದೆ ಗ್ರಾಮದವರು ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತಾರೆ. ಸಾಕ್ಷಿಯು ಲಿಖಿತ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ–1 ಎ ಎಂದು ಗುರುತಿಸಲಾಯಿತು. ನಾನು ದೂರು ಕೊಟ್ಟ ಎರಡು ದಿನಗಳ ನಂತರ ಪೊಲೀಸರು ಮಹಜರ್ ಗಾಗಿ ಮಳಲಗದ್ದೆ ರಾಜಪ್ಪ ರವರ ಮದುವೆ ಮನೆ ಎದುರುಗಡೆ ಬಂದಿರುತ್ತಾರೆ. ಸದರಿ ಸ್ಥಳದಲ್ಲಿ ಬೆಳಗ್ಗೆ 10.00 ರಿಂದ 11.00 ಗಂಟೆಯವರೆಗೆ ಪಂಚನಾಮೆಯನ್ನು ಮಾಡಿರುತ್ತಾರೆ. ಸಾಕ್ಷಿಯು ಘಟನಾ ಸ್ಥಳ ಮತ್ತು ಅಮಾನತ್ತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–2 ಮತ್ತು

ಸಾಕ್ಷಿಯ ಸಹಿಯನ್ನು ನಿಪಿ–2 ಎ ಎಂದು ಗುರುತಿಸಲಾಯಿತು. ಸಾಕ್ಷಿಯು ಘಟನಾ ಸ್ಥಳದಲ್ಲಿ ತೆಗೆದ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–3 ಮತ್ತು 4 ಎಂದು ಗುರುತಿಸಲಾಯಿತು. ನಾನು ನ್ಯಾಯಾಲಯದ ಮುಂದೆ ಕಲ್ಲು ಮತ್ತು ದೊಣ್ಣೆಯನ್ನು ನೋಡಿದರೆ ಗುರುತಿಸುತ್ತೇನೆ. ಅವುಗಳನ್ನು ಎಂ.ಓ–1 ಮತ್ತು 2 ಎಂದು ಗುರುತಿಸಲಾಯಿತು. ನಾನು ಆ ದಿನ ನನ್ನ ಮೇಲೆ ಮಾಡಿದ 1 ಮತ್ತು 2 ನೇ ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿತರ ಗುರುತಿಸುವಿಕೆಯಲ್ಲಿ ಯಾವುದೇ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ಸಿ.ಆರ್.ಪಿ.ಸಿ ಕಲಂ 317 ಅಡಿಯಲ್ಲಿ ವಿನಾಯಿತಿ ಅರ್ಜಿಯನ್ನು ಸಲ್ಲಿಸಿರುತ್ತಾರೆ.

(**ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದ ಕಾರಣ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲಿಗೆ ಅನುಮತಿ ಕೋರಿದ್ದು, ಸಾಕ್ಷಿಯು ಅಭಿಯೋಜನಾ ಪ್ರಕರಣಕ್ಕೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದ ಕಾರಣ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು**).

**<u>ಪಾಟಿ ಸವಾಲುಃ ಮಾನ್ಯ ಸ.ಸ.ಅಭಿಯೋಜಕವರಿಂದಃ</u>**

ದಿಃ 30.05.2024 ರಂದು ನನ್ನ ಮೇಲೆ ಹಲ್ಲೆ ಮಾಡಿರುತ್ತಾರೆ ಅಂದರೆ ಸರಿ. ನಾನು ದಿಃ 05.06.2024 ರಂದು ದೂರು ನೀಡಿರುತ್ತೇನೆ ಅಂದರೆ ಸರಿ. ದಿಃ06.06.2024 ರಂದು ಪೊಲೀಸರು ನನಗೆ ಹಲ್ಲೆ ಮಾಡಿದ ಜಾಗವಾದ ಮಳಲಗದ್ದೆ

CC No.2072/2024
CW-1 PW-1

ಕನ್ನಪ್ಪ ರವರಿಗೆ ಸೇರಿದ ಮನೆಯ ಪಕ್ಕದಲ್ಲಿ ನಾನು ತೋರಿಸಿದ ಸ್ಥಳದಲ್ಲಿ ಪಂಚನಾಮೆಯನ್ನು ಜರುಗಿಸಿರುತ್ತಾರೆ ಅಂದರೆ ಸರಿ.

**ಪಾಟಿ ಸವಾಲುಃ ಆರೋಪಿ ಪರ ಶ್ರೀ. ಎ.ಸಿ.ವೈ. ವಕೀಲರಿಂದಃ**

1 ಮತ್ತು 2 ನೇ ಆರೋಪಿತರು ನನ್ನ ದಾಯಾದಿಗಳು. ನನ್ನ ಮೇಲೆ ಹಲ್ಲೆ ಮಾಡಿದ ಸ್ಥಳವು ಸಂಪೂರ್ಣ ಕತ್ತಲಾಗಿತ್ತು ಅಂದರೆ ಸರಿ. ನನ್ನ ಮೇಲೆ ಹಲ್ಲೆ ಮಾಡಿದ ಸ್ಥಳದ ಅಕ್ಕಪಕ್ಕ ಯಾವುದೇ ಮನೆಗಳು ಇಲ್ಲ ಅಂದರೆ ಸರಿ. ನಾನು ಹೇಳಿದಂತೆ ಆರೋಪಿತರು ನನ್ನ ಮೇಲೆ ಹಲ್ಲೆ ಮಾಡಿರುವುದಿಲ್ಲ ಅಂದರೆ ಸರಿಯಲ್ಲ. ಆರೋಪಿತರು ನನಗೆ ಟವಲ್ ನಿಂದ ಬಾಯಿ ಕಟ್ಟಿ ದೊಣ್ಣೆ ಮತ್ತು ಕಲ್ಲಿನಿಂದ ಹಲ್ಲೆ ಮಾಡಿರುವುದಿಲ್ಲ ಅಂದರೆ ಸರಿಯಲ್ಲ. ದಿಃ30.05.2024 ರಂದು ನಾನು ಆಸ್ಪತ್ರೆಗೆ ಹೋಗಿರುವುದಿಲ್ಲ ಅಂದರೆ ಸರಿಯಲ್ಲ. ನಾನು ಆ ದಿನ ಹೆಚ್ಚಿಗೆ ಸಾರಾಯಿ ಕುಡಿದ ಕಾರಣ ವಾಂತಿ ಮಾಡಿಕೊಂಡಿರುತ್ತೇನೆ ಅದಂರೆ ಸರಿಯಲ್ಲ. ನಾನು ಆ ದಿನ ಹೆಚ್ಚಿಗೆ ಸಾರಾಯಿ ಕುಡಿದು ಬಿದ್ದು ಗಾಯ ಮಾಡಿಕೊಂಡು ಆಸ್ಪತ್ರೆಗೆ ದಾಖಲಾಗಿರುತ್ತೇನೆ ಅಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

**(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಕಂಪ್ಯೂಟರೀಕರಿಸಲಾಯ್ತು).**

**ಓ.ಹೇ.ಕೇ. ಸರಿ ಇದೆ ಎಂದು ಒಪ್ಪಿದ್ದಾರೆ.**

**ಪ್ರಧಾನ ವ್ಯವಹಾರ ನ್ಯಾ ಮತ್ತು ಜೆ.ಎಂ.ಎಫ್.ಸಿ**
**ಸೊರಬ.**